## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2015–16ರ ಸಾಲಿನಲ್ಲಿ ರಾಷ್ಟ್ರೀಯ ಗ್ರಾಮೀಣ ಕುಡಿಯುವ ನೀರು ಕಾರ್ಯಕ್ರಮ (NRDWP) ಯೋಜನೆಯ – WQM&S ಅಡಿ ಅನುದಾನ ಬಿಡುಗಡೆ ಮಾಡುವ ಕುರಿತು.

ಓದಲಾಗಿದೆ:
1. ಭಾರತ ಸರ್ಕಾರದ ಮಂಜೂರಾತಿ ಆದೇಶ ಸಂ.W-11020/12/NRDWP/Water/538, ದಿನಾಂಕ 18-03-2015
2. ಆರ್ಥಿಕ ಇಲಾಖೆಯ ಸಹಮತಿ ಸಂ.ಆಇ 260 ವೆಚ್ಚ–6/2015, ದಿ: 2–12–2015

**ಪೀಠಿಕೆ:**

ಮೇಲೆ ಓದಲಾದ (1) ರ ಆದೇಶದನ್ವಯ 2015–16ನೇ ಸಾಲಿನಲ್ಲಿ ರಾಷ್ಟ್ರೀಯ ಗ್ರಾಮೀಣ ಕುಡಿಯುವ ನೀರು ಕಾರ್ಯಕ್ರಮ (NRDWP) ಯೋಜನೆಯ WQM&S ಅಡಿ ಕೇಂದ್ರ ಸರ್ಕಾರವು 2ನೇ ಕಂತಿನ ಒಟ್ಟು ರೂ.675.01 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಿದ್ದು, ಸದರಿ ಅನುದಾನವು ರಾಜ್ಯದ ಬೊಕ್ಕಸಕ್ಕೆ ಜಮೆ ಆಗಿರುತ್ತದೆ. ಪ್ರಸ್ತುತ ಕೇಂದ್ರ ವಲಯದ ಸದರಿ ರೂ.675.01 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲು ಉಲ್ಲೇಖಿತ (2) ರಲ್ಲಿ ಆರ್ಥಿಕ ಇಲಾಖೆಯು ಸಹಮತಿಸಿರುತ್ತದೆ. ಸದರಿ ಅನುದಾನವನ್ನು NRDWP ಮಾರ್ಗಸೂಚಿಗಳನ್ವಯ ಕುಡಿಯುವ ನೀರಿನ ಯೋಜನೆಯ WQM&S ಅಡಿ ಉಪಯೋಗಿಸಿಕೊಳ್ಳುವ ಸಲುವಾಗಿ ಬಿಡುಗಡೆ ಮಾಡಲು ನಿರ್ಣಯಿಸಲಾಗಿದೆ. ಆದ್ದರಿಂದ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/41/ಗ್ರಾನೀಸ(2)/2015, ಬೆಂಗಳೂರು, ದಿನಾಂಕ 16–12–2015**

ಪೀಠಿಕೆಯಲ್ಲಿನ ವಾಸ್ತವಾಂಶಗಳ ಹಿನ್ನೆಲೆಯಲ್ಲಿ, ರಾಷ್ಟ್ರೀಯ ಗ್ರಾಮೀಣ ಕುಡಿಯುವ ನೀರು ಕಾರ್ಯಕ್ರಮ (NRDWP) ಮಾರ್ಗಸೂಚಿಗಳನ್ವಯ 2015–16ನೇ ಸಾಲಿನಲ್ಲಿ NRDWP ಯೋಜನೆಯ WQM&S ಅಡಿ ಒಟ್ಟು **ರೂ.675.01 ಲಕ್ಷಗಳ (ಆರು ನೂರ ಎಪ್ಪತ್ತೈದು ಲಕ್ಷಗಳ ಒಂದು ಸಾವಿರ ರೂಪಾಯಿಗಳು ಮಾತ್ರ)** ಕೇಂದ್ರ ವಲಯದ ಅನುದಾನವನ್ನು ಬಿಡುಗಡೆ ಮಾಡಲು ಸರ್ಕಾರವು ಹರ್ಷಿಸುತ್ತದೆ.

2. ಈ ಆದೇಶದಲ್ಲಿ ಬಿಡುಗಡೆಯಾದ ಅನುದಾನವನ್ನು NRDWP ಮಾರ್ಗಸೂಚಿಗಳನ್ವಯ ಹಾಗೂ ಈಗಾಗಲೇ ಸರ್ಕಾರವು SWSM ವತಿಯಿಂದ ನೀಡಿರುವ ಆದೇಶಗಳು / ಮಾರ್ಗಸೂಚಿಗಳನ್ವಯ ಹಾಗೂ ಸಂಬಂಧಿಸಿದ **NRDWP - WQM&S** ಅಡಿ ಮಾತ್ರ ವಿನಿಯೋಗಿಸತಕ್ಕದ್ದು.

3. ಮುಖ್ಯ ಇಂಜಿನಿಯರ್, ಗ್ರಾ.ಕು.ನೀ.&.ನೈ. ಇಲಾಖೆ ಇವರು ಪ್ರಸ್ತುತ ಬಿಡುಗಡೆ ಮಾಡುತ್ತಿರುವ ಅನುದಾನವನ್ನು ಸಂಬಂಧಪಟ್ಟ ಕಾಮಗಾರಿಗಳ ಅನುಷ್ಠಾನದ ಭೌತಿಕ ಹಾಗೂ ಆರ್ಥಿಕ ಪ್ರಗತಿಯನ್ನು IMIS ನಲ್ಲಿ ಪ್ರತಿ ಮಾಹೆ ಇಂದೀಕರಿಸತಕ್ಕದ್ದು.

4. ಈ ಆದೇಶದಲ್ಲಿ ಬಿಡುಗಡೆ ಮಾಡಲಾದ ಅನುದಾನವನ್ನು ಈಗಾಗಲೇ ಕೇಂದ್ರ ಸರ್ಕಾರಕ್ಕೆ ಅಧಿಕೃತವಾಗಿ ಘೋಷಿಸಿರುವ SWSM – ಕಾರ್ಪೋರೇಷನ್ ಬ್ಯಾಂಕ್, ಮಲ್ಲೇಶ್ವರಂ ಶಾಖೆ, ಬೆಂಗಳೂರು ಮೂಲ ಉಳಿತಾಯ ಖಾತೆ ಸಂಖ್ಯೆ: 01/038111 ಮುಖಾಂತರ ವಿನಿಯೋಗಿಸತಕ್ಕದ್ದು. ಬ್ಯಾಂಕ್‌ನವರು ಯಾವುದೇ ಕಾರಣದಲ್ಲೂ ಇತರೆ ಘಟಕದಡಿಯ ಬಿಲ್ಲುಗಳ ಪಾವತಿಗೆ ವರ್ಗಾಯಿಸದಂತೆ ಕ್ರಮವಹಿಸತಕ್ಕದ್ದು.

5. ಈ ಆದೇಶದಲ್ಲಿ ಬಿಡುಗಡೆ ಮಾಡಲಾದ ಅನುದಾನವನ್ನು ಯಾವುದೇ ಕಾರಣದಲ್ಲೂ ಇತರೆ ಘಟಕದಡಿ ವರ್ಗಾಯಿಸಿ ಉಪಯೋಗಿಸಿಕೊಳ್ಳದಂತೆ ಕ್ರಮವಹಿಸತಕ್ಕದ್ದು. ಈ ಅನುದಾನವನ್ನು 20ನೇ ಜನವರಿ 2016 ರೊಳಗೆ ಖರ್ಚು ಭರಿಸಲು ಕ್ರಮ ವಹಿಸತಕ್ಕದ್ದು.

ಸರ್ಕಾರದ ಉಪ ಕಾರ್ಯದರ್ಶಿ (ಗ್ರಾನೀಸ)
ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ

6. ಈ ಆದೇಶವನ್ನು ಆರ್ಥಿಕ ಇಲಾಖೆಯ ಸಹಮತಿ ಸಂ.ಆಇ 260 ವೆಚ್ಚ-6/2015, ದಿನಾಂಕ 2-12-2015 ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ. ಕೃಷ್ಣಪ್ಪ)
ಸರ್ಕಾರದ ಉಪ ಕಾರ್ಯದರ್ಶಿ (ಗ್ರಾ.ನೀ.ಸ.) (ಪ್ರ)
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ.

ಪ್ರತಿಯನ್ನು :

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು-1) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಎಯು-2) ಕರ್ನಾಟಕ, ಬೆಂಗಳೂರು.
4. ಉಪ ಮಹಾಲೇಖಪಾಲರು, ಮಹಾಲೇಖಪಾಲರು (ಎಯು-1) ರವರ ಶಾಖಾ ಕಛೇರಿ, ಕಾಲೇಜು ರಸ್ತೆ, ಧಾರವಾಡ.
5. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
6. ಮುಖ್ಯ ಇಂಜಿನಿಯರ್, ಗ್ರಾ.ಕು.ನೀ.&.ನೈ. ಇಲಾಖೆ, 1ನೇ ಮಹಡಿ, ಕಾವೇರಿಭವನ, ಬೆಂಗಳೂರು-09.
7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
8. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
9. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಯೋಜನಾ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬೆಂಗಳೂರು.
10. ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
11. ವಿಶೇಷಾಧಿಕಾರಿ (ಜಿಪಂ) ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿ, ಆರ್ಥಿಕ ಇಲಾಖೆ, ಬೆಂಗಳೂರು-1.
12. ನಿರ್ದೇಶಕರು (WSSO), RDW&SD ಕೇಂದ್ರ ಕಛೇರಿ, ಬೆಂಗಳೂರು.
13. ಮುಖ್ಯ ಲೆಕ್ಕಾಧಿಕಾರಿಗಳು, RDW&SD ಕೇಂದ್ರ ಕಛೇರಿ, ಬೆಂಗಳೂರು.
14. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ (6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
15. ಆಯುಕ್ತರು, RDW&SD ಮತ್ತು ಪದನಿಮಿತ್ತ ಸರ್ಕಾರದ ಅಪರ ಕಾರ್ಯದರ್ಶಿ ಇವರ ಆಪ್ತ ಸಹಾಯಕರಿಗೆ.
16. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್‌ಸಾಬ್‌ರವರ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ ಮಹಲ್ ರಸ್ತೆ, ಮೈಸೂರು ಇವರ ಆಪ್ತ ಸಹಾಯಕರಿಗೆ.
17. ಆಂತರಿಕ ಆರ್ಥಿಕ ಸಲಹೆಗಾರರು, RDPR ಇಲಾಖೆ ಇವರ ಆಪ್ತ ಸಹಾಯಕರು.
18. **ಕಾರ್ಪೋರೇಷನ್ ಬ್ಯಾಂಕ್, ಮಲ್ಲೇಶ್ವರ ಶಾಖೆ,** ಸಂಪಿಗೆ ರಸ್ತೆ, ಬೆಂಗಳೂರು.
19. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ "ಕರ್ನಾಟಕ ವಿಕಾಸ" ಗ್ರಾ.ಅ.ಪಂ.ರಾಜ್ ಇಲಾಖೆ, ಬೆಂಗಳೂರು.
20. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾಅಪಂ.ರಾಜ್ ಇಲಾಖೆ (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು).
21. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ).
22. ಗ್ರಾಅಪಂ.ರಾಜ್ ಇಲಾಖೆಯ ಮಾಹಿತಿ ಕೇಂದ್ರ (10 ಪ್ರತಿಗಳು).
23. ಶಾಖಾ ರಕ್ಷಾ ಕಡತ : ಹೆಚ್ಚುವರಿ ಪ್ರತಿಗಳು.